# ಕರ್ನಾಟಕ ಸರ್ಕಾರ ಕಾರ್ಮಿಕ ಇಲಾಖೆ

ಸಂಖ್ಯೆ:ಕವೇಕಾ–2/ಗ್ರಂ.ಮೇ/ಮಾಹಿತಿ/2017–18

ಕಾರ್ಮಿಕ ಆಯುಕ್ತರವರ ಕಛೇರಿ,
ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ,
ಬೆಂಗಳೂರು–29, ದಿನಾಂಕ: 12–9–2017.

## ಕಛೇರಿ ಆದೇಶ

ವಿಷಯ: "ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು" ಉದ್ದಿಮೆಗೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿ ಹೊರಡಿಸಿದ್ದ ಅಧಿಸೂಚನೆಯಿಂದ ಗ್ರಂಥಪಾಲಕ / ಗ್ರಂಥಾಲಯ ಮೇಲ್ವಿಚಾರಕ ಹುದ್ದೆಗಳನ್ನು ಹಿಂಪಡೆದಿರುವ ಬಗ್ಗೆ.

ಉಲ್ಲೇಖ: ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 85 ಎಲ್‌ಡಬ್ಲ್ಯೂಎ 2015, ದಿನಾಂಕ: 04–09–2017.

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಅಧಿಸೂಚನೆಯನ್ವಯ, "ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು" ಉದ್ದಿಮೆಗೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿ ದಿನಾಂಕ: 05–08–2016 ರಂದು ಹೊರಡಿಸಿದ್ದ ಅಧಿಸೂಚನೆಯ ಅನುಸೂಚಿಯ ಪಟ್ಟಿಯ ಕ್ರಮ ಸಂಖ್ಯೆ: 01 ರಿಂದ ಗ್ರಂಥಪಾಲಕ / ಗ್ರಂಥಾಲಯ ಮೇಲ್ವಿಚಾರಕ ಹುದ್ದೆಗಳನ್ನು ಹಿಂಪಡೆದಿರುತ್ತದೆ. ಸದರಿ ಅಧಿಸೂಚನೆಯ ಪ್ರತಿಯನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸಲಾಗಿದೆ.

DLC
PA/S
2454

ಸದರಿ ಅಧಿಸೂಚನೆಯ ಪ್ರತಿಗಳನ್ನು ಈ ಕೆಳಗೆ ಸೂಚಿಸಿದಂತೆ ಸಾರ್ವಜನಿಕರ ಗಮನಕ್ಕೆ ತರಲು ತಿಳಿಸಿದೆ;

1. ನಿಮ್ಮ ಕಛೇರಿಯ ಹಾಗೂ ನಿಮ್ಮ ಕಾರ್ಯವ್ಯಾಪ್ತಿಯ ಎಲ್ಲಾ ಕಛೇರಿಗಳ ಸೂಚನಾ ಫಲಕಗಳಲ್ಲಿ ಪ್ರದರ್ಶಿಸುವುದು
2. ಈ ಅಧಿಸೂಚನೆಯ ಬಗ್ಗೆ ಪತ್ರಿಕಾ ಪ್ರಕಟಣೆಗಳನ್ನು ಹೊರಡಿಸಿ, ಮುದ್ರಣ ಹಾಗೂ ವಿದ್ಯುನ್ಮಾನ ಸುದ್ದಿ ಮಾಧ್ಯಮಗಳಲ್ಲಿ ಪ್ರಚಾರ ನೀಡುವುದು
3. ಈ ಅಧಿಸೂಚನೆಯ ಪ್ರತಿಯನ್ನು ತಹಸೀಲ್ದಾರರು, ಉಪವಿಭಾಗಾಧಿಕಾರಿಗಳು, ಜಿಲ್ಲಾಧಿಕಾರಿಗಳು, ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತ್ ಕಾರ್ಯನಿರ್ವಹಣಾಧಿಕಾರಿಗಳ ಕಛೇರಿಗಳಲ್ಲಿ, ಪ್ರದರ್ಶಿಸಲು ಕ್ರಮ ವಹಿಸುವುದು.
4. ಈ ಅಧಿಸೂಚನೆಯನ್ನು ಹೋಬಳಿ ಮಟ್ಟದ ಕಂದಾಯ ನಿರೀಕ್ಷಕರ ಕಛೇರಿಗಳಲ್ಲಿ, ಗ್ರಾಮ ಮಟ್ಟದ ಗ್ರಾಮ ಲೆಕ್ಕಾಧಿಕಾರಿಗಳ ಕಛೇರಿಗಳಲ್ಲಿ ಹಾಗೂ ಗ್ರಾಮ ಪಂಚಾಯತಿಗಳಲ್ಲಿ ಪ್ರದರ್ಶಿಸುವುದು.
5. ಈ ಅಧಿಸೂಚನೆಯ ಪ್ರತಿಯನ್ನು ನಿಮ್ಮ ಕಾರ್ಯವ್ಯಾಪ್ತಿಯ ಎಲ್ಲಾ ಸರ್ಕಾರಿ ಕಛೇರಿಗಳಲ್ಲಿ ಹಾಗೂ ಸಾರ್ವಜನಿಕರು ಸೇರುವ ಸ್ಥಳಗಳಲ್ಲಿ ಪ್ರದರ್ಶಿಸುವುದು.

SBL
15/9/17

6. ಈ ಅಧಿಸೂಚನೆಯ ಪ್ರತಿಯನ್ನು ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರದ ಸ್ಥಳೀಯ ವಾರ್ತಾ ಮತ್ತು ಪ್ರಚಾರ ಇಲಾಖೆಯ ಕಚೇರಿಗಳಿಗೆ ಕಳುಹಿಸಿ, ಅವರುಗಳ ಮೂಲಕ ವ್ಯಾಪಕ ಪ್ರಚಾರಕ್ಕೆ ಕ್ರಮ ಕೈಗೊಳ್ಳುವುದು

7. ಈ ಅಧಿಸೂಚನೆಯನ್ನು ವೃತ್ತಿಪರ ಹಾಗೂ ಅಧಿಕೃತವಾದ ಸಾಮಾಜಿಕ ಮಾಧ್ಯಮ (Social Media) ಗಳ ಮೂಲಕ ಸಂಬಂಧಿಸಿದವರ ಗಮನಕ್ಕೆ ತರುವುದು

ಮೇಲ್ಕಂಡ ಎಲ್ಲಾ ಕ್ರಮಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಕೈಗೊಂಡು, ಕ್ರಮ ಕೈಗೊಂಡ ವರದಿಯನ್ನು ಈ ಕಛೇರಿಗೆ ಸಲ್ಲಿಸಲು ತಿಳಿಸಿದೆ.

(ಆರ್.ಆರ್. ಜನ್ನು)
ಕಾರ್ಮಿಕ ಆಯುಕ್ತರು

<u>ಇವರಿಗೆ</u>

1. ಎಲ್ಲಾ ಕಾರ್ಮಿಕ ಅಧಿಕಾರಿಗಳು- ತಮ್ಮ ಕಾರ್ಯವ್ಯಾಪ್ತಿಯಲ್ಲಿ ಬರುವ ಹಿರಿಯ ಕಾರ್ಮಿಕ ನಿರೀಕ್ಷಕರು ಹಾಗೂ ಕಾರ್ಮಿಕ ನಿರೀಕ್ಷಕರುಗಳಿಗೆ ಪ್ರತಿಗಳನ್ನು ತಲುಪಿಸಿ ಸೂಕ್ತ ಕ್ರಮ ಕೈಗೊಳ್ಳಲು ಸೂಚಿಸುವುದು.
2. ಎಲ್ಲಾ ಸಹಾಯಕ ಕಾರ್ಮಿಕ ಆಯುಕ್ತರು
3. ಎಲ್ಲಾ ಉಪ ಕಾರ್ಮಿಕ ಆಯುಕ್ತರು
4. ಉಪ ಕಾರ್ಮಿಕ ಆಯುಕ್ತರು (ಪ್ರಚಾರ ಮತ್ತು ಅಂಕಿ ಅಂಶ) ಬೆಂಗಳೂರು- ಇಲಾಖೆಯ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು
5. ಅಪರ ಕಾರ್ಮಿಕ ಆಯುಕ್ತರು (ಆಡಳಿತ) ಬೆಂಗಳೂರು
6. ಅಪರ ಕಾರ್ಮಿಕ ಆಯುಕ್ತರು (ಕೈಗಾರಿಕಾ ಬಾಂಧವ್ಯ) ಬೆಂಗಳೂರು
7. ಜಂಟಿ ಕಾರ್ಮಿಕ ಆಯುಕ್ತರು (ಕನಿಷ್ಠ ವೇತನ) ಬೆಂಗಳೂರು

} ಮಾಹಿತಿಗಾಗಿ

<u>ಪ್ರತಿಯನ್ನು</u>: ಮಾನ್ಯ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ, ಕಾರ್ಮಿಕ ಇಲಾಖೆ, ವಿಕಾಸ ಸೌಧ, ಬೆಂಗಳೂರು, ಇವರ ಆದ್ಯ ಅವಗಾಹನೆ ಹಾಗೂ ಮಾಹಿತಿಗಾಗಿ ಸಲ್ಲಿಸಿದೆ.

ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 85 ಎಲ್‌ಡಬ್ಲ್ಯೂಎ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ:04-09-2017.

## ಅಧಿಸೂಚನೆ

ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 71 ಎಲ್‌ಡಬ್ಲ್ಯೂಎ 2015 ದಿನಾಂಕ:05.08.2016ರ ಅಂತಿಮ ಅನುಸೂಚಿಯ ಪಟ್ಟಿಯ ಕ್ರಮ ಸಂಖ್ಯೆ:01ರ ಗ್ರಂಥಪಾಲಕ/ಗ್ರಂಥಾಲಯ ಮೇಲ್ವಿಚಾರಕರು ಇವರಿಗೆ ಸಂಬಂಧಿಸಿದಂತೆ ಕನಿಷ್ಠ ವೇತನವನ್ನು ನಿಗಧಿಪಡಿಸಿ ಅಧಿಸೂಚನೆಯನ್ನು ಹೊರಡಿಸಲಾಗಿದೆ.

***ಸದರಿ ಅಧಿಸೂಚನೆಯನ್ನು ಹೊರಡಿಸುವಾಗ ಈ ಕೆಳಕಂಡ ಕ್ರಮಗಳನ್ನು ಅನುಸರಿಸಿರುವುದಿಲ್ಲ.***

1. ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 71 ಎಲ್‌ಡಬ್ಲ್ಯೂಎ 2015 ದಿನಾಂಕ:22.05.2015ನ್ನು ಕಾರ್ಮಿಕರಿಗೆ ಅನುಸೂಚಿಯಲ್ಲಿ ನಿಗದಿಪಡಿಸಿರುವಂತೆ ಕನಿಷ್ಠ ವೇತನವನ್ನು ಪರಿಷ್ಕರಿಸಲು ಸರ್ಕಾರದ ಕರಡು ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ಪತ್ರದ ಭಾಗ-4ಎ ರಲ್ಲಿ ದಿನಾಂಕ:30.07.2015ರಂದು ಪ್ರಕಟಿಸಿರುವ ಅನುಸೂಚಿಯಲ್ಲಿ ಗ್ರಂಥಪಾಲಕ ಹುದ್ದೆ ಮಾತ್ರ ಒಳಗೊಂಡಿರುತ್ತದೆ. ಆದರೆ ಅದರಲ್ಲಿ ಗ್ರಂಥಾಲಯ ಮೇಲ್ವಿಚಾರಕರು ಒಳಗೊಂಡಿರುವುದಿಲ್ಲ. ಅಂತಿಮ ಅಧಿಸೂಚನೆ ಸಂಖ್ಯೆ: ಕಾಇ 71 ಎಲ್‌ಡಬ್ಲ್ಯೂಎ 2015 ದಿನಾಂಕ:05.08.2016ರಲ್ಲಿ ಗ್ರಂಥಪಾಲಕ/ಗ್ರಂಥಾಲಯ ಮೇಲ್ವಿಚಾರಕರನ್ನು ಒಳಗೊಂಡಿದೆ. ಗ್ರಂಥಪಾಲಕ ಹಾಗೂ ಗ್ರಂಥಾಲಯ ಮೇಲ್ವಿಚಾರಕರ ಹುದ್ದೆಯು ಬೇರೆ ಬೇರೆಯಾಗಿರುತ್ತದೆ. ಪ್ರಸ್ತಾವನೆಯನ್ನು ಅಧಿಸೂಚಿಸುವ ಪೂರ್ವದಲ್ಲಿ 1948ರ ಕನಿಷ್ಠ ವೇತನ ಕಾಯ್ದೆಯ ಕಲಂ 5(1)(ಬಿ)ರನ್ವಯ ಭಾದಿತರಾಗುವವರ ಮಾಹಿತಿಗಾಗಿ ಪ್ರಕಟಿಸುವುದು ಕಡ್ಡಾಯವಾಗಿರುತ್ತದೆ. ಗ್ರಂಥಾಲಯ ಮೇಲ್ವಿಚಾರಕರಿಗೆ ಸಂಬಂಧಿಸಿದಂತೆ ಇಂತಹ ಯಾವುದೇ ಪ್ರಸ್ತಾವನೆಯನ್ನು ಅಧಿಸೂಚಿಸಲಾಗಿಲ್ಲ. ಅಂದರೆ ನಿಗದಿತ ಕಾರ್ಯವಿಧಾನವನ್ನು ಅನುಸರಿಸಿರುವುದಿಲ್ಲ.
2. ಸದರಿ ಅಧಿಸೂಚನೆಯನ್ನು ಹೊರಡಿಸುವ ಪೂರ್ವದಲ್ಲಿ ಆಡಳಿತ ಇಲಾಖೆಯಾದ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯನ್ನು ಸಂಪರ್ಕಿಸಿ ಅವರ ಅಭಿಪ್ರಾಯ ಪಡೆದಿರುವುದಿಲ್ಲ.
3. ಗ್ರಂಥಾಲಯ ಮೇಲ್ವಿಚಾರಕರು ಗೌರವ ಸಂಭಾವನೆ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದ್ದಾರೆ.

ಮೇಲೆ ತಿಳಿಸಿರುವ ಕಾರಣಗಳ ಹಿನ್ನಲೆಯಲ್ಲಿ ಕನಿಷ್ಠ ವೇತನ ಕಾಯ್ದೆ 1948ರ ಕಲಂ 26(2)ರನ್ವಯ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 71 ಎಲ್‌ಡಬ್ಲ್ಯೂಎ 2015 ದಿನಾಂಕ:05.08.2016ರ ಅನುಸೂಚಿಯ ಪಟ್ಟಿಯ ಕ್ರಮ ಸಂಖ್ಯೆ:01ರ ಗ್ರಂಥಪಾಲಕ/ಗ್ರಂಥಾಲಯ

..2..

ಮೇಲ್ವಿಚಾರಕರು ಇವರಿಗೆ ಸಂಬಂಧಿಸಿದಂತೆ ಅಧಿಸೂಚನೆಯನ್ನು ಹಿಂಪಡೆಯಲಾಗಿದೆ.

ಈ ಅಂಶವನ್ನು ಹೊರತುಪಡಿಸಿ, ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 71 ಎಲ್‌ಡಬ್ಲ್ಯೂಎ 2015 ದಿನಾಂಕ:05.08.2016ರ ಉಳಿದ ಎಲ್ಲಾ ಅಂಶಗಳು ಯಥಾವತ್ತಾಗಿ ಮುಂದುವರೆಯುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,
4.9.2017
(ಎಲ್.ಎಸ್.ಶ್ರೀಕಂಠಬಾಬು)
ಸರ್ಕಾರದ ಉಪ ಕಾರ್ಯದರ್ಶಿ
ಕಾರ್ಮಿಕ ಇಲಾಖೆ.

ಇವರಿಗೆ,

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಸರ್ಕಾರದ ಈ ತಿದ್ದುಪಡಿ ಆದೇಶವನ್ನು ಮುಂದಿನ ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಸದರಿ ಪ್ರಕಟಣೆಯ 200 ಪ್ರತಿಗಳನ್ನು ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು-1 ಇವರಿಗೆ, ಕಳುಹಿಸುವಂತೆ ಕೋರಲಾಗಿದೆ.

ಪ್ರತಿಗಳು:-

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ), ಬಹುಮಹಡಿಗಳ ಕಟ್ಟಡ, ಬೆಂಗಳೂರು.
2. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು-29.
3. ರಾಜ್ಯದ ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ. (ಕಾರ್ಮಿಕ ಆಯುಕ್ತರ ಮೂಲಕ).
4. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು. (ಕಾರ್ಮಿಕ ಆಯುಕ್ತರ ಮೂಲಕ).
5. ನಿರ್ದೇಶಕರು, ವಾರ್ತಾ ಮತ್ತು ಪ್ರಚಾರ ಇಲಾಖೆ, ವಾರ್ತಾ ಭವನ, ಇನ್‌ಫೆಂಟ್ರಿ ರಸ್ತೆ, ಬೆಂಗಳೂರು.
6. ಸದಸ್ಯ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿ, ಕಾರ್ಮಿಕ ಆಯುಕ್ತರ ಕಚೇರಿ, ಕಾರ್ಮಿಕ ಭವನ, ಬೆಂಗಳೂರು.
7. ಎಲ್ಲಾ ಜಿಲ್ಲೆಗಳ ಕಾರ್ಮಿಕ ಅಧಿಕಾರಿಗಳಿಗೆ (ಕಾರ್ಮಿಕ ಆಯುಕ್ತರ ಮೂಲಕ).
8. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ, ವಿಕಾಸಸೌಧ, ಬೆಂಗಳೂರು.
10. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕಾರ್ಮಿಕ ಇಲಾಖೆ, ವಿಕಾಸಸೌಧ.
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಕಾರ್ಮಿಕ ಇಲಾಖೆ, ವಿಕಾಸಸೌಧ.
12. ಶಾಖಾ ರಕ್ಷ ಕಡತ/ಹೆಚ್ಚುವರಿ ಪ್ರತಿ.